ಸಾಕ್ಷಿಯನ್ನು ದಿಃ **17.03.2021** ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಬಿ ಎಂ ಎನ್ ವಕೀಲರಿಂದಃ**

ಬಸವರಾಜು ಬಿನ್ ಮಹದೇವಪ್ಪ, ವಯಸ್ಸು **26** ವರ್ಷ, ನಾನು ಈ ದಾವೆಯಲ್ಲಿ ವಾದಿಯ ಪರವಾಗಿ ಜಿ.ಪಿ.ಎ ಹೊಂದಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದ್ದೇ ಆಗಿರುತ್ತದೆ. ಈ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಸಲು ದಾವಾ ಸಂಖ್ಯೆಃ **91/5** ರ ಆದೇಶ ಮತ್ತು ಡಿಕ್ರಿಯ ಧೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**1** ಎಂದು, ಸರ್ವೆ ನಂ.**55/8** ರ ಆಸ್ತಿಗೆ ಸಂಬಂಧಿಸಿದಂತೆ ಒಂದು ಆರ್ ಟಿ ಸಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**2** ಎಂದು, ದಿಃ**04.11.2014** ರಂದು ಪಂಚಾಯಿತಿ ಅಭಿವೃದ್ಧಿ ಇಲಾಖೆಯವರಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**3** ಎಂದು, ದಿಃ**12.11.2011** ರಂದು ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ನೀಡಿದ ಒಂದು ನೋಟಿಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**4** ಎಂದು, **4** ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**5** ರಿಂದ **8** ಎಂದು, **3** ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**9** ರಿಂದ **11** ಎಂದು, ಸರ್ವೆ ನಂ **55/8** ರ ಆಸ್ತಿಗೆ ಸಂಬಂಧಿಸಿದ **6** ಆರ್ ಟಿ ಸಿಗಳ ದೃಡೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.**12** ರಿಂದ **17** ಎಂದು, ದಾವಾ ಆಸ್ತಿಗೆ ಸಂಬಂಧಿಸಿದ ಇಂಡೆಕ್ಸ್ ಆಫ್ ಲ್ಯಾಂಡ್ ನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**18** ಎಂದು, ದಾವಾ ಆಸ್ತಿಗೆ ಸಂಬಂಧಿಸಿದ **1962** ಇಸ್ವಿಯಿಂದ **1970** ರವರೆಗಿನ ಅಸಲು ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**19** ರಿಂದ **25** ಎಂದು, ಸರ್ವೆ ನಂ **55/8** ರ ಆಸ್ತಿಗೆ ಸಂಬಂಧಿಸಿದ ಆರ್ ಆರ್ ಪಕ್ಕ ದೃಡೀಕೃತ ನಕಲನ್ನು

ಹಾಜರುಪಡಿಸಿದ್ದು ಅದನ್ನು ನಿಪಿ.**26** ಎಂದು, ದಿ:**02.02.2019** ರಂದು ಉಪ ವಿಭಾಗ ಅಧಿಕಾರಿಗಳ ನ್ಯಾಯಾಲಯದ ಆದೇಶದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**27** ಎಂದು, ಸ. ನಂ. **55/8** ರ ಆಸ್ತಿಗೆ ಸಂಬಂಧಿಸಿದಂತೆ ಒಂದ ಎಸ್ ಆರ್ ಟಿಪ್ಪಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**28** ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ ಆಕಾರ್ ಬಂದ್ ನ ದೃಡೀಕೃತ ನಕಲನ್ನು ಹಾಜರುಡಿಸಿದ್ದು ಅದನ್ನು ನಿಪಿ.**29** ಎಂದು, ನಮ್ಮ ಕುಟುಂಬದ ವಂಶವೃಕ್ಷದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**30** ಎಂದು, ನನ್ನ ತಂದೆ ನನ್ನ ಪರವಾಗಿ ನೀಡಿರುವ ಜಿ.ಪಿ.ಎ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.**31** ಎಂದು ಗುರುತಿಸಲಾಯಿತು.

ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಈ ಮೇಲೆ ಸಾಕ್ಷಿ ಹೇಳಿದ ಸಾಕ್ಷ್ಯವನ್ನು ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿದ ನಂತರ, ಓದಿ ಹೇಳಿದ ಮೇರೆಗೆ ಸಾಕ್ಷಿ ಸರಿ ಇದೆ ಎಂದು ಒಪ್ಪಿ ತಮ್ಮ ಸಹಿ ಮಾಡಿರುತ್ತಾರೆ.)

ಓ ಹೇ ಕೇ ಸ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಲಯ ಮತ್ತು
ಜೆ.ಎಂ.ಎಫ್.ಸಿ. ತಿ.ನರಸೀಪುರ